ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಯಲಹಂಕ ವಲಯ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಬ್ಯಾ.ವಿ/ಪಿ.ಆರ್/ 17 /2022-23

ಕಾರ್ಯಪಾಲಕ ಅಭಿಯಂತರರು ಕಛೇರಿ
ಬ್ಯಾಟರಾಯನಪುರ ವಿಭಾಗ, ಬಿಬಿಎಂಪಿ,
ಬೆಂಗಳೂರು-92, ದಿನಾಂಕ: 16/09/2022

ಆಡಳಿತಾತ್ಮಕ ಅನುಮೋದನೆ

ವಿಷಯ: Supply of water throught water tanker in Rachenahalli village, Sriramapura, Sampigehalli and surrounding area Ward No.08 Jakkur.

ಉಲ್ಲೇಖ: ವಾರ್ಡ್ ಮಟ್ಟದ ಸಾರ್ವಜನಿಕ ಲೋಕೋಪಯೋಗಿ, ನಗರ ಯೋಜನೆ ಮೂಲ ಸೌಕರ್ಯ ಸ್ಥಾಯಿ ಸಮಿತಿ ಹಾಗೂ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಮಾನ್ಯ ಆಡಳಿತಗಾರರು ದಿನಾಂಕ: 06-08-2022 ರಂದು ನಡೆಸಿದ ಸಭೆಯ ನಡವಳಿ ವಿಷಯ ಸಂಖ್ಯೆ: 178/2022-23.

* * * * *

ಮೇಲಿನ ವಿಷಯದಲ್ಲಿ ತಿಳಿಸಿರುವ ಕಾಮಗಾರಿಗೆ ಸಹಾಯಕ ಕಾರ್ಯಪಾಲಕ ಅಭಿಯಂತರರು ಬ್ಯಾಟರಾಯನಪುರ ಉಪ ವಿಭಾಗ ರವರು 2022-23ನೇ ಸಾಲಿನ ಆಯವ್ಯಯದ ಪಿ-3726 ರಡಿಯಲ್ಲಿ ಆಡಳಿತಾತ್ಮಕ ಅನುಮೋದನೆಯನ್ನು ಕೋರಿರುವ ಮೇರೆಗೆ, 2022-23ನೇ ಸಾಲಿನ ಆಯವ್ಯಯದಲ್ಲಿ ಮೀಸಲಿಟ್ಟಿರುವ ಪಿ.ಓ.ಡಬ್ಲ್ಯು. ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಕ್ರಿಯಾ ಯೋಜನೆಗೆ ಉಲ್ಲೇಖದಂತೆ ಮಾನ್ಯ ಆಡಳಿತಗಾರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರಿಂದ ಅನುಮೋದನೆ ದೊರೆತಿರುವುದರಿಂದ, ಮಾನ್ಯ ಆಯುಕ್ತರು ನಿಯೋಜಿಸಿರುವ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂಖ್ಯೆ: ಬಿ12(1)/ಪಿ.ಆರ್/394/21-22, ದಿನಾಂಕ: 18-01-2022 ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ರೂ. 10.00 ಲಕ್ಷಗಳಿಗೆ (ಹತ್ತು ಲಕ್ಷ ಮಾತ್ರ) ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಮತ್ತು ಆಡಳಿತಾತ್ಮಕ ಅನುಮೋದನೆಯ ಪುಸ್ತಕದ ಪುಟ ಸಂಖ್ಯೆ ____ ರಲ್ಲಿ ನಮೂದಿಸಿ, ಈ ಕೆಳಗಿನ ಷರತ್ತುಗಳಿಗೊಳಪಡಿಸಿ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ಷರತ್ತುಗಳು:

1. ಅಂದಾಜು ಪಟ್ಟಿಯ ಮೊತ್ತ ರೂ 2.00 ಲಕ್ಷಗಳಿಗೆ ಮೀರಿದ ಕಾಮಗಾರಿಗಳಿಗೆ ಟೆಂಡರ್ ಕರೆಯುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
3. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
4. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
5. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
6. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
7. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
8. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
9. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ/WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ,
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1) ಮಾನ್ಯ ಜಂಟಿ ಆಯುಕ್ತರು (ಯಲಹಂಕ) ವಲಯ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ.
2) ಕಾರ್ಯಪಾಲಕ ಅಭಿಯಂತರರು (ಗುಣ ನಿಯಂತ್ರಣ) ವಿಭಾಗ ರವರ ಮಾಹಿತಿಗಾಗಿ.